ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಬೀದರ್ ಜಿಲ್ಲೆಯಲ್ಲಿ SCP/STP ಕಾಮಗಾರಿಗಳ ಕುರಿತು

ಶ್ರೀರಘುನಾಥ್‌ರಾವ್‌ಮಲ್ಕಾಪುರೆ(ವಿಧಾನಸಭೆಯಿಂದಚುನಾಯಿತರಾದವರು):-

285 (322) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19 ಮತ್ತು 2019-20ನೇ ಸಾಲಿನ ಅಂತ್ಯಕ್ಕೆ ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ ಮತ್ತು ಎಸ್.ಟಿ.ಪಿ ಯೋಜನೆಯಡಿಯಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿ ಬೀದರ್ ಜಿಲ್ಲೆಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; (ವರ್ಷವಾರು ತಾಲ್ಲೂಕುವಾರು ಕಾಮಗಾರಿಗಳೊಂದಿಗೆ ವಿವರ ನೀಡುವುದು)

(ಆ) ಸದರಿ ಯೋಜನೆಗೆ ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಕೈಗೊಂಡಿದ್ದಲ್ಲಿ ಕಾಮಗಾರಿಯ ಸಂಪೂರ್ಣ ವಿವರ, ಪತ್ಯೇಕವಾಗಿ ಕಾಮಗಾರಿಗಳಿಗೆ ತಗುಲಿದ ವೆಚ್ಚ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರು, ವಿಧಾನಸಭಾ ಕ್ಷೇತ್ರವಾರು, ವರ್ಷವಾರು ಸಂಪೂರ್ಣ ವಿವರ ಒದಗಿಸುವುದು ;

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳಲ್ಲಿ ಕೈಗೊಳ್ಳದೇ ಬೇರೆ ಬೇರೆ ಜನರಲ್ ಕಾಲೋನಿಗಳಲ್ಲಿ ಕಾಮಗಾರಿಗಳನ್ನು ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಅಧಿಕಾರಿಗಳ ವಿರುದ್ದ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)